**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.1506/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಮಂಜುನಾಥ್ ಎಂ.ಎಸ್ | ಪ್ರಾಸಾ-4 |
| ತಂದೆಯ ಹೆಸರು | : ಶ್ರೀನಿವಾಸ್ | ಚಾಸಾ-11 |
| ವಯಸ್ಸು | : 39 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಹೆಚ್.ಸಿ-249 | ದಿನಾಂಕಃ 17.02.2026. |
| ವಾಸಸ್ಥಳ | : ಗೋಣೀಬೀಡು ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಙ್ಞ್ಯಾಸ.ಸ.ಅ. ರವರಿಂದ:**

ನಾನು 2016 ರಿಂದ ದಿ.01.08.2024 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.10.04.2024 ರಂದು ಠಾಣಾ ಹಗಲು SHO ಆಗಿ ಕರ್ತವ್ಯದಲ್ಲಿ ಇದ್ದ ಚಾಸಾ-12 ರವರು ಚಿಕ್ಕಮಗಳೂರಿನ ಎಂ.ಜಿ. ಆಸ್ಪತ್ರೆಯಲ್ಲಿ ಚಾಸಾ-1 ರವರು ಹಲ್ಲೆಯ ಹಿನ್ನಲೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದು, ಅವರ ಹೇಳಿಕೆಯನ್ನು ಪಡೆದುಕೊಂಡು ಹಾಜರಿಸುವಂತೆ ಸೂಚಿಸಿದ ಮೇರೆಗೆ, ನಾನು ಚಿಕ್ಕಮಗಳೂರಿನ ಎಂ.ಜಿ. ಆಸ್ಪತ್ರೆಗೆ ತೆರಳಿ, ಚಾಸಾ-1 ರವರ ಹೇಳಿಕೆಯನ್ನು ಸ.4.30 ರಿಂದ 5.30 ರವರಿಗೆ ಪಡೆದುಕೊಂಡಿರುತ್ತೇನೆ. ಸ.7.30 ರ ಸಮಯಕ್ಕೆ ಚಾಸಾ-12 ರವರಿಗೆ ಮುಂದಿನ ಕ್ರಮ ಕೈಗೊಳ್ಳಲು ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಡಿ.ಎಸ್. ವಕೀಲರಿಂದಃ**

ನಾನು ದಿ.10.04.2024 ರಂದು ಚಿಕ್ಕಮಗಳೂರಿನ ಎಂ.ಜಿ ಆಸ್ಪತ್ರೆಯಲ್ಲಿ ಚಾಸಾ-1 ರವರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆ ದಿನ ಚಾಸಾ-1 ರವರೊಟ್ಟಿಗೆ ಯಾರು ಆಸ್ಪತ್ರೆಯಲ್ಲಿ ಇದ್ದರು ಎಂಬುದರ ಬಗ್ಗೆ ನಾನು ಗಮನಿಸಿರುವುದಿಲ್ಲ. ಆ ದಿನ ಚಾಸಾ-1 ರವರು ತನ್ನ ಹೆಂಡತಿಗೂ ಹಲ್ಲೆಯಾಗಿರುವ ಬಗ್ಗೆ ತಿಳಿಸಿರುತ್ತಾರೆ. ನಾನು ಆ ದಿನ ಚಾಸಾ-1 ರವರ ಹೆಂಡತಿ ಮತ್ತು ಅವರ ಮಗಳ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ. ನನಗೆ ಚಾಸಾ-12 ರವರು ಮೌಖಿಕವಾಗಿ ಚಾಸಾ-1 ರವರ ಹೇಳಿಕೆಯನ್ನು ಪಡೆದುಕೊಂಡು ಬರುವಂತೆ ಆದೇಶಿಸಿರುತ್ತಾರೆ. ನಿಪಿ-1 ರೊಟ್ಟಿಗೆ ಆಸ್ಪತ್ರೆಯಿಂದ ಬಂದ ಮಾಹಿತಿಯನ್ನು ಲಗತ್ತಿಸಿರುವುದಿಲ್ಲ ಎಂದರೆ ಸರಿ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ  ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್  ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.